**ಕರ್ನಾಟಕ ವಿಧಾನ ಪರಿಷತ್ತು**

| | | | |
|---|---|---|---|
| 1 | ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 1020 |
| 2 | ಸದಸ್ಯರ ಹೆಸರು | : | ಶ್ರೀ ಶಿವಕುಮಾರ್ ಕೆ (ನಾಮನಿರ್ದೇಶನ ಹೊಂದಿದವರು) |
| 3 | ಉತ್ತರಿಸುವ ದಿನಾಂಕ | : | 12-03-2026 |
| 4 | ಉತ್ತರಿಸುವವರು | : | ಉಪ ಮುಖ್ಯಮಂತ್ರಿಗಳು |

| ಕ್ರ ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಬೆಂಗಳೂರು ನಗರದ ಹೃದಯ ಭಾಗವಾದ ಚಾಮರಾಜಪೇಟೆ ಮತ್ತು ಮೈಸೂರು ರಸ್ತೆಯಲ್ಲಿ ಪ್ರತಿನಿತ್ಯ ವಾಹನ ದಟ್ಟಣೆ ವಿಪರೀತವಾಗಿ ಹೆಚ್ಚುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಈ ಭಾಗದಲ್ಲಿ ಸುಗಮ ಸಂಚಾರಕ್ಕಾಗಿ ಕಳೆದ ಎರಡು ವರ್ಷಗಳಲ್ಲಿ ಕೈಗೊಂಡಿರುವ ಪ್ರಮುಖ ಕ್ರಮಗಳೇನು; | • ಬಂದಿದೆ.<br>• ಕಳೆದ 02 ವರ್ಷಗಳಲ್ಲಿ ಸದರಿ ರಸ್ತೆಯಲ್ಲಿ ವಾಹನ ದಟ್ಟಣೆಯನ್ನು ಕಡಿಮೆಗೊಳಿಸಲು ಕಾರ್ಯಸಾಧ್ಯತಾ ವರದಿಯನ್ನು ತಯಾರಿಸಲಾಗಿದ್ದು, ಸದರಿ ಕಾರ್ಯಸಾಧ್ಯತಾ ವರದಿಯಂತೆ ಹಾಲಿ ಚಾಮರಾಜಪೇಟೆ ಸಿರಸಿ ಜಂಕ್ಷನ್‌ಗೆ ಕೊನೆಗೊಳ್ಳುವ ಮೇಲ್ಸೇತುವೆಯನ್ನು ಬಿ.ಹೆಚ್.ಇ.ಎಲ್ ಕಿಮಕೋ ಜಂಕ್ಷನ್‌ವರೆಗೂ ವಿಸ್ತರಿಸಲು ಯೋಜನೆಯನ್ನು ರೂಪಿಸಲಾಗಿರುತ್ತದೆ.<br>• ಪ್ರಸ್ತುತ, ರೂ.810.00 ಕೋಟಿಗಳಿಗೆ (ಭೂ-ಸ್ವಾಧೀನ ವೆಚ್ಚ ಸೇರಿದಂತೆ) ಅಂದಾಜು ಪಟ್ಟಿಯನ್ನು ತಯಾರಿಸಲಾಗಿದ್ದು, ಡಿ.ಪಿ.ಆರ್ ತಯಾರಿಸಿ, ಆಡಳಿತಾತ್ಮಕ ಅನುಮೋದನೆಯ ಪ್ರಸ್ತಾವನೆ ಪರಿಶೀಲನೆಯಲ್ಲಿದೆ.<br>• ಉಳಿದಂತೆ, ನಾಯಂಡನಹಳ್ಳಿ ಮೇಲ್ಸೇತುವೆಯ ನಂತರ ರಾಜರಾಜೇಶ್ವರಿನಗರ ಮುಖ್ಯರಸ್ತೆ ಕಮಾನು (Arch) ಭಾಗದಲ್ಲಿ ಮೇಲ್ಸೇತುವೆ ನಿರ್ಮಾಣವನ್ನು ಕೈಗೆತ್ತಿಕೊಳ್ಳಲಾಗಿದ್ದು, ಭೂ-ಸ್ವಾಧೀನ ಪ್ರಕ್ರಿಯೆ ಜಾರಿಯಲ್ಲಿರುತ್ತದೆ.<br>• ರಾಜರಾಜೇಶ್ವರಿನಗರ ಮುಖ್ಯರಸ್ತೆಯಿಂದ ಕಮಾನು (Arch) ಭಾಗದಿಂದ ಕೆಂಗೇರಿ ರಸ್ತೆಯವರೆಗೂ ರೂ.75.00 ಕೋಟಿಗಳ ವೆಚ್ಚದಲ್ಲಿ ಡಾಂಬರೀಕರಣ ಯೋಜನೆಯನ್ನು ಕೈಗೆತ್ತಿಕೊಂಡು ಕಾಮಗಾರಿಯನ್ನು ಬಹುತೇಕ ಪೂರ್ಣಗೊಳಿಸಲಾಗಿರುತ್ತದೆ. |
| ಆ) | ಚಾಮರಾಜಪೇಟೆಯಲ್ಲಿನ ಅಸ್ತಿತ್ವದಲ್ಲಿರುವ ಮೇಲ್ಸೇತುವೆಯನ್ನು ಕೆಂಗೇರಿಯವರೆಗೆ ವಿಸ್ತರಿಸುವ ಯಾವ ಹೊಸದಾಗಿ ಸುದೀರ್ಘ ಮೇಲ್ಸೇತುವೆಯನ್ನು (Elevated Corridor) ನಿರ್ಮಿಸುವ ಯಾವುದೇ ವೈಜ್ಞಾನಿಕ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ; ಇದ್ದಲ್ಲಿ, ಈ ಯೋಜನೆಯ ಅಂದಾಜು ವೆಚ್ಚ ಹಾಗೂ ಪ್ರಸ್ತುತ ಹಂತದ ಮಾಹಿತಿ ನೀಡುವುದು; | |
| ಇ) | ಮೈಸೂರು ರಸ್ತೆಗೆ ಪರ್ಯಾಯವಾಗಿ ಕೆಂಗೇರಿಯನ್ನು ತಲುಪಲು ಮೆಟ್ರೋ ರೈಲಿನ ಹೊರತಾಗಿ, ಟನಲ್ ರಸ್ತೆ (Tunnel Road) ಅಥವಾ ರಾಜಕಾಲುವೆಗಳ ಪಕ್ಕದಲ್ಲಿ ಪರ್ಯಾಯ ರಸ್ತೆಗಳನ್ನು ಅಭಿವೃದ್ಧಿಪಡಿಸುವ ಮೂಲಕ ಸಂಚಾರ ದಟ್ಟಣೆ ಕಡಿಮೆ ಮಾಡುವ ಬಗ್ಗೆ ಸರ್ಕಾರವು ಯಾವುದಾದರೂ ವಿಶೇಷ ಕ್ರಿಯಾ ಯೋಜನೆಯನ್ನು ರೂಪಿಸಿದೆಯೇ? | • ಪ್ರಸ್ತುತ ಈ ವಿಧದ ಯಾವುದೇ ವಿಶೇಷ ಕ್ರಿಯಾಯೋಜನೆಯ ಪ್ರಸ್ತಾವನೆ ಸರ್ಕಾರದ ಮುಂದಿರುವುದಿಲ್ಲ. |

ನಅಇ 215 ಎಂಎನ್‌ವೈ 2026 (ಇ)

(ಡಿ.ಕೆ. ಶಿವಕುಮಾರ್)
ಉಪ ಮುಖ್ಯಮಂತ್ರಿ